ಸಿ.ಸಿ. ನಂಬರಃ 926/2023

**ಪಿ.ಡಬ್ಲ್ಯೂಃ 1**

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 08-01-2026**

**(ಸಾಕ್ಷಿಯ ಸ್ವಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲಾಗಿರುತ್ತದೆ.)**

**ಮುಂದುವರೆದ ಮುಖ್ಯ ವಿಚಾರಣೆಃ ಫಿರ್ಯಾದುದಾರರ ಪರ ಶ್ರೀ ಎಮ್.ಎಲ್.ಎನ್. ವಕೀಲರಿಂದ,**

ಸಾಲದ ಅರ್ಜಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-7 ಎಂದು, ಸಾಲದ ಕರಾರಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-8 ಎಂದು, ಸಾಲದ ಡಿಮಾಂಡ ಪ್ರೊಮಿಸರಿ ನೋಟಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-9 ಎಂದು, ಜಾಮೀನುದಾರರಿಂದ ಪಡೆದ ಭದ್ರತಾ ಪತ್ರದ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-10 ಎಂದು, ಸಾಲದ ಹಣ ಪಾವತಿ ಮಾಡಿದ ಬಾಬ್ತು ರಶೀದಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-11 ಎಂದು, ಸಾಲದ ಖಾತೆಯ ಸ್ಟೇಟಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು.

**(ನಿಪಿ-7 ರಿಂದ 11 ರ ಮೂಲ ದಾಖಲೆಗಳನ್ನು ಅವಶ್ಯಕತೆ ಇದ್ದಾಗ ಹಾಜರುಪಡಿಸಬೇಕೆಂಬ ಷರತ್ತಿಗೆ ಒಳಪಟ್ಟು ಸಾಕ್ಷಿಗೆ ವಾಪಸ್ಸು ನೀಡಲಾಯಿತು.)**

**ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬರೆಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ನ್ಯಾ.ದಂ., ಭಟ್ಕಳ**